ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ಸಂಖ್ಯೆ : ವಾಇ : ಉ ನಿ : ಸುಮಪ : 2015–16 : ನವೆಂಬರ್ 23, 2015

# ಶಾಸಕ ಜಗದೀಶ್ ಕುಮಾರ್ ಅವರ ನಿಧನಕ್ಕೆ ಮುಖ್ಯಮಂತ್ರಿ ದಿಗ್ಭ್ರಮೆ

**ಬೆಂಗಳೂರು, ನವೆಂಬರ್ 23 :**

ಬೆಂಗಳೂರಿನ ಹೆಬ್ಬಾಳ ಕ್ಷೇತ್ರದ ಶಾಸಕ ಶ್ರೀ ಆರ್. ಜಗದೀಶ್ ಕುಮಾರ್ ಅವರ ನಿಧನಕ್ಕೆ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ದಿಗ್ಭ್ರಮೆ ವ್ಯಕ್ತಪಡಿಸಿದ್ದಾರೆ.

ಸದನದ ಕಲಾಪದಲ್ಲಿ ಸದಾ ಕಾಲ ಸಕ್ರಿಯವಾಗಿ ಪಾಲ್ಗೊಳ್ಳುತ್ತಿದ್ದ ಶ್ರೀ ಜಗದೀಶ್ ಕುಮಾರ್ ಅವರು ಉತ್ತಮ ಸಂಸದೀಯ ಪಟುವಾಗಿ ರೂಪುಗೊಂಡಿದ್ದರು. ರಾಜ್ಯದ ರಾಜಧಾನಿ ಬೆಂಗಳೂರಿನ ಸರ್ವಾಂಗೀಣ ಅಭಿವೃದ್ಧಿಯ ಕುರಿತು ಅಪಾರ ಕಳಕಳಿಯನ್ನು ಹೊಂದಿದ್ದ ಶ್ರೀ ಜಗದೀಶ್ ಕುಮಾರ್ ಅವರು ನಗರದ ಜನ–ಜೀವನವನ್ನು ಉತ್ತಮಪಡಿಸಲು ಅತ್ಯಂತ ಉಪಯುಕ್ತ ಸಲಹೆಗಳನ್ನು ನೀಡುತ್ತಿದ್ದರು. ಇಂದೂ ಕೂಡಾ ಸದನದಲ್ಲಿ ಹಾಜರಾಗಿ ಕಲಾಪದಲ್ಲಿ ಭಾಗವಹಿಸಿದ್ದ ಶ್ರೀ ಜಗದೀಶ್ ಕುಮಾರ್ ಅವರು ಇನ್ನಿಲ್ಲ ಎಂಬುದನ್ನು ನಂಬಲಾಗುತ್ತಿಲ್ಲ ಎಂದು ಶ್ರೀ ಸಿದ್ದರಾಮಯ್ಯ ಅವರು ಹೇಳಿದ್ದಾರೆ.

ನಮ್ಮನ್ನಗಲಿರುವ ಈ ಯುವ ಚೇತನ ಶ್ರೀ ಜಗದೀಶ್ ಕುಮಾರ್ ಅವರ ಆತ್ಮಕ್ಕೆ ಚಿರಶಾಂತಿ ದೊರೆಯಲಿ. ಶ್ರೀಯುತರ ಅಗಲಿಕೆಯಿಂದ ಉಂಟಾದ ದುಃಖವನ್ನು ಭರಿಸಲು ಅವರ ಕುಟುಂಬದ ಸದಸ್ಯರು ಮತ್ತು ಅಪಾರ ಅಭಿಮಾನಿ ವರ್ಗಕ್ಕೆ ಶಕ್ತಿಯನ್ನು ಕರುಣಿಸಲಿ ಎಂದು ಮುಖ್ಯಮಂತ್ರಿ ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ.

## ಅಂತಿಮ ನಮನ

ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ನಗರದ ವಿಕ್ರಂ ಆಸ್ಪತ್ರೆಗೆ ಭೇಟಿ ನೀಡಿ ಶ್ರೀ ಜಗದೀಶ್ ಕುಮಾರ್ ಅವರ ಪಾರ್ಥಿವ ಶರೀರದ ದರ್ಶನ ಪಡೆದು ಅಂತಿಮ ನಮನ ಸಲ್ಲಿಸಿದರು.

*********

ಡಿ ಪಿ ಎಂ